# ಕರ್ನಾಟಕ ಸರ್ಕಾರದ ನಡವಳಿ

ವಿಷಯ: 1) ಶ್ರೀ ಮಾರುತಿ ನಾನಪ್ಪ ಮಾವರ್ಕರ್, ಹಿಂದಿನ ಅಧ್ಯಕ್ಷರು, 2) ಶ್ರೀ ಹನುಮಂತ, ಅಂದಿನ ಕಾರ್ಯದರ್ಶಿ ಮತ್ತು 3) ಶ್ರೀ ಹನುಮಂತ ಬಿನ್ ಯಂಕಪ್ಪ ತಾಳಿಕೋಟಿ, ಅಂದಿನ ಕಾರ್ಯದರ್ಶಿ – ಹಳ್ಳೂರ ಗ್ರಾಮ ಪಂಚಾಯತಿ, ಗೋಕಾಕ ತಾಲ್ಲೂಕು, ಬೆಳಗಾವಿ ಜಿಲ್ಲೆ ಇವರುಗಳ ವಿರುದ್ಧ ಮಾನ್ಯ ಉಪಲೋಕಾಯುಕ್ತ ವರದಿಯನ್ವಯ ಕ್ರಮ ಜರುಗಿಸುವ ಬಗ್ಗೆ.

ಓದಲಾಗಿದೆ:

ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಅ.ಸ.ಪ.ಸಂಖ್ಯೆ: Compt/LOK/BGM/1918/2017/ARLO-3, ದಿನಾಂಕ: 16.10.2018

ಪ್ರಸ್ತಾವನೆ:

1) ಮೇಲೆ ಓದಲಾದ ಪತ್ರದಲ್ಲಿ, ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಪತ್ರದ ಸಂಗಡ ಕಳುಹಿಸಿರುವ ಮಾನ್ಯ ಉಪಲೋಕಾಯುಕ್ತರು ದಿನಾಂಕ: 04.10.2018ರಂದು ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(3)ರ ಅನ್ವಯ ಸಲ್ಲಿಸಿರುವ ವರದಿಯಲ್ಲಿ ಶ್ರೀ ಬಸಪ್ಪ ಶಂಕರಪ್ಪ ಸಂತಿ, ಹಳ್ಳೂರ ಗ್ರಾಮ (ಇನ್ನು ಮುಂದೆ ದೂರುದಾರರು ಎಂದು ಕರೆಯಲ್ಪಡುತ್ತಾರೆ) ಇವರು ಶ್ರೀ ಮಾರುತಿ ನಾನಪ್ಪ ಮಾವರ್ಕರ್, ಹಿಂದಿನ ಅಧ್ಯಕ್ಷರು ಇವರ ಸಂಬಂಧಿಕರಿಗೆ ಕಾನೂನುಬಾಹಿರವಾಗಿ ನಿವೇಶನಗಳನ್ನು ವಿತರಿಸಿರುವುದು ಹಾಗೂ ಬಸವ ವಸತಿ ಯೋಜನೆ ಮತ್ತು ಇಂದಿರಾ ಆವಾಜ್ ಯೋಜನೆಯಡಿ ಸಂಬಂಧಿಕರಿಗೆ ಸಹಾಯ ಧನ ಬಿಡುಗಡೆ ಮಾಡಿ ಸರ್ಕಾರದ ಅನುದಾನ ದುರುಪಯೋಗಪಡಿಸಿಕೊಂಡಿರುವುದಾಗಿ ಲೋಕಾಯುಕ್ತ ಸಂಸ್ಥೆಗೆ ದೂರು ಸಲ್ಲಿಸಿದ್ದು, ಸದರಿ ದೂರಿನಲ್ಲಿ 1) ಶ್ರೀ ಮಾರುತಿ ನಾನಪ್ಪ ಮಾವರ್ಕರ್, ಹಿಂದಿನ ಅಧ್ಯಕ್ಷರು, 2) ಶ್ರೀ ಹನುಮಂತ, ಅಂದಿನ ಕಾರ್ಯದರ್ಶಿ 3) ಶ್ರೀ ಹನುಮಂತ ಬಿನ್ ಯಂಕಪ್ಪ ತಾಳಿಕೋಟಿ – ಹಳ್ಳೂರ ಗ್ರಾಮ ಪಂಚಾಯತಿ, ಗೋಕಾಕ ತಾಲ್ಲೂಕು, ಬೆಳಗಾವಿ ಜಿಲ್ಲೆ ಇವರುಗಳ ವಿರುದ್ಧ (ಇನ್ನು ಮುಂದೆ 1 ರಿಂದ 3ನೇ ಎದುರುದಾರರು ಎಂದು ಕ್ರಮವಾಗಿ ಕರೆಯಲ್ಪಡುತ್ತಾರೆ) ರವರ ವಿರುದ್ಧ ಕರ್ತವ್ಯಲೋಪ ಮತ್ತು ದುರ್ನಡತೆಯ ಬಗ್ಗೆ ನೀಡಿದ ದೂರನ್ನು ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ 9 ರಡಿಯಲ್ಲಿ ತೆಗೆದುಕೊಳ್ಳಲಾಗಿದೆ.

2) ಕಡತದಲ್ಲಿನ ಸಂಗತಿಗಳು ಹಾಗೂ ದಾಖಲಾತಿಗಳಿಂದ ಎದುರುದಾರರು ಸರ್ಕಾರಿ/ ಸಾರ್ವಜನಿಕ ನೌಕರರಾಗಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠೆ ಮತ್ತು ಸರ್ಕಾರಿ ಸೇವಕರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ದುರ್ವರ್ತನೆ/ ದುರ್ನಡತೆ ಎಸಗಿರುವುದು ಮೇಲ್ನೋಟಕ್ಕೆ ಕಂಡುಬಂದಿರುವ ಹಿನ್ನೆಲೆಯಲ್ಲಿ ಎದುರುದಾರರು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು, 1966ರ ನಿಯಮ 3(1) ರನ್ವಯ ಎದುರುದಾರರು ಶಿಸ್ತು ಕ್ರಮಕ್ಕೆ ಬಾಧ್ಯರಾಗಿರುತ್ತಾರೆಂದು ಕಂಡು ಬರುವುದರಿಂದ, ಎದುರುದಾರರಾದ 2) ಶ್ರೀ ಹನುಮಂತ, ಅಂದಿನ ಕಾರ್ಯದರ್ಶಿ 3) ಶ್ರೀ ಹನುಮಂತ ಬಿನ್ ಯಂಕಪ್ಪ ತಾಳಿಕೋಟಿ – ಹಳ್ಳೂರ ಗ್ರಾಮ ಪಂಚಾಯತಿ, ಗೋಕಾಕ ತಾಲ್ಲೂಕು, ಬೆಳಗಾವಿ ಜಿಲ್ಲೆ ಇವರುಗಳ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 14–ಎ ರಡಿ ಹಾಗೂ ಎದುರುದಾರರು–2 ರವರು ನಿವೃತ್ತಿ ಹೊಂದಿರುವುದರಿಂದ ಕ.ನಾ.ಸೇ.ನಿ. 214(2)(ಬಿ) ರಡಿ ಅನುಮತಿ ನೀಡಿ, ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲು ಶಿಫಾರಸ್ಸು ಮಾಡಿರುತ್ತಾರೆ.

3) ಹಾಗೂ ಶ್ರೀ ಮಾರುತಿ ನಾನಪ್ಪ ಮಾವರ್ಕರ್, ಹಿಂದಿನ ಅಧ್ಯಕ್ಷರು ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43ಎ ರನ್ವಯ ಕ್ರಮ ಜರುಗಿಸಿ ಸದಸ್ಯತ್ವ ತೆಗೆದು ಹಾಕುವುದು ಹಾಗೂ ಹಾಗೂ ರೂ.1,14,500/–ಗಳನ್ನು ಶ್ರೀ ಮಾರುತಿ ನಾನಪ್ಪ ಮಾವರ್ಕರ್, ಹಿಂದಿನ ಅಧ್ಯಕ್ಷರು ಇವರಿಂದ ವಸೂಲಿ ಮಾಡಲು ಶಿಫಾರಸ್ಸು ಮಾಡಿರುತ್ತಾರೆ. ಈ ಬಗ್ಗೆ ಕ್ರಮ ಜರುಗಿಸಿ ವರದಿ ಸಲ್ಲಿಸಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಬೆಳಗಾವಿ ಜಿಲ್ಲಾ ಪಂಚಾಯತಿ ರವರಿಗೆ ನಿರ್ದೇಶನ ನೀಡಲಾಗಿದೆ.

4) ಸರ್ಕಾರವು ಪ್ರಸ್ತಾವನೆಯನ್ನು ಪರಿಶೀಲಿಸಿ, 2) ಶ್ರೀ ಹನುಮಂತ, ಅಂದಿನ ಕಾರ್ಯದರ್ಶಿ ಮತ್ತು 3) ಶ್ರೀ ಹನುಮಂತ ಬಿನ್ ಯಂಕಪ್ಪ ತಾಳಿಕೋಟಿ, ಅಂದಿನ ಕಾರ್ಯದರ್ಶಿ – ಹಳ್ಳೂರ ಗ್ರಾಮ ಪಂಚಾಯತಿ, ಗೋಕಾಕ ತಾಲ್ಲೂಕು, ಬೆಳಗಾವಿ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 14–ಎ ರಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 500 ಗ್ರಾಪಂಕಾ 2018, ಬೆಂಗಳೂರು, ದಿನಾಂಕ 17.11.2018**

ಪ್ರಸ್ತಾವನೆಯಲ್ಲಿ ವಿವರಿಸಲಾಧ ಅಂಶಗಳ ಹಿನ್ನೆಲೆಯಲ್ಲಿ, 2) ಶ್ರೀ ಹನುಮಂತ, ಅಂದಿನ ಕಾರ್ಯದರ್ಶಿ 3) ಶ್ರೀ ಹನುಮಂತ ಬಿನ್ ಯಂಕಪ್ಪ ತಾಳಿಕೋಟಿ, ಅಂದಿನ ಕಾರ್ಯದರ್ಶಿ – ಹಳ್ಳೂರ ಗ್ರಾಮ ಪಂಚಾಯತಿ, ಗೋಕಾಕ ತಾಲ್ಲೂಕು, ಬೆಳಗಾವಿ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು, ಎದುರುದಾರ–2 ರವರು ನಿವೃತ್ತ ಹೊಂದಿರುವುದರಿಂದ ಕರ್ನಾಟಕ ನಾಗರೀಕ ಸೇವಾ ನಿಯಮಗಳು 1957 ರ ನಿಯಮ 214ರಡಿ ಸರ್ಕಾರವು ಮಂಜೂರಾತಿ ನೀಡಿ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 14–ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ–8 ಅಥವಾ ಕರ್ನಾಟಕ ನಾಗರೀಕ ಸೇವಾ ನಿಯಮಗಳು 1957ರ ರ ನಿಯಮ 214 ರ ಅಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

19/11/18
(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1) ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2) ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಬೆಳಗಾವಿ ಜಿಲ್ಲಾ ಪಂಚಾಯತಿ, ಬೆಳಗಾವಿ ಜಿಲ್ಲೆ,
5) ಕಾರ್ಯನಿರ್ವಾಹಕ ಅಧಿಕಾರಿ, ಗೋಕಾಕ ತಾಲ್ಲೂಕು ಪಂಚಾಯತಿ, ಗೋಕಾಕ, ಬೆಳಗಾವಿ ಜಿಲ್ಲೆ, (ಸದರಿ ನೌಕರರಿಗೆ ಈ ಆದೇಶದ ಪ್ರತಿಯನ್ನು ತಲುಪಿಸಿ ಸ್ವೀಕೃತಿಯನ್ನು ಸರ್ಕಾಕ್ಕೆ ಸಲ್ಲಿಸಲು ತಿಳಿಸಿದೆ)
6) ಶ್ರೀ ಹನುಮಂತ, ಅಂದಿನ ಕಾರ್ಯದರ್ಶಿ – ಹಳ್ಳೂರ ಗ್ರಾಮ ಪಂಚಾಯತಿ, ಗೋಕಾಕ ತಾಲ್ಲೂಕು, ಬೆಳಗಾವಿ ಜಿಲ್ಲೆ
7) ಶ್ರೀ ಹನುಮಂತ ಬಿನ್ ಯಂಕಪ್ಪ ತಾಳಿಕೋಟಿ, ಅಂದಿನ ಕಾರ್ಯದರ್ಶಿ – ಹಳ್ಳೂರ ಗ್ರಾಮ ಪಂಚಾಯತಿ, ಗೋಕಾಕ ತಾಲ್ಲೂಕು, ಬೆಳಗಾವಿ ಜಿಲ್ಲೆ
8) ಗಣಕ ಕೋಶ – ಇಲಾಖಾ ವೆಬ್‌ಸೈಟ್ ನಲ್ಲಿ ಪ್ರಕಟಿಸಲು.
9) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.